<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 2016–17 ನೇ ಸಾಲಿಗೆ ರಾಜ್ಯದಲ್ಲಿರುವ ಖಾಸಗಿ ವೈದ್ಯಕೀಯ/ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕೋತ್ತರ ಕೋರ್ಸುಗಳ ಸೀಟುಗಳ ಶುಲ್ಕವನ್ನು ಪರಿಷ್ಕರಿಸುವ ಬಗ್ಗೆ.

------

<u>ಓದಲಾಗಿದೆ:</u>

ಕರ್ನಾಟಕ ವೃತ್ತಿಪರ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಸೀಟು ಹಂಚಿಕೆ ಮತ್ತು ಶುಲ್ಕ ನಿಗದಿ ಕುರಿತು ಸರ್ಕಾರ ಹಾಗೂ ಖಾಸಗಿ ಆಡಳಿತ ಮಂಡಳಿಗಳ ನಡುವೆ ಸಮ್ಮತಾಭಿಪ್ರಾಯ ಒಪ್ಪಂದ ಮಾಡಿಕೊಳ್ಳಲು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿ: 31–03–2016 ರಂದು ಜರುಗಿದ ಸಭೆಯ ನಿರ್ಣಯಗಳು.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಸಭೆಯ ನಿರ್ಣಯಗಳನ್ವಯ 2016–17 ನೇ ಸಾಲಿನ ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳ ಸೀಟು ಹಂಚಿಕೆ & ಶುಲ್ಕ ನಿಗದಿಗೆ ಸಂಬಂಧಿಸಿದಂತೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಸಲುವಾಗಿ ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ ಕಾಮೆಡ್–ಕೆ, ಕೆ.ಆರ್.ಎಲ್.ಎಂ.ಪಿ.ಸಿ.ಎ & ಎ.ಎಂ.ಪಿ.ಸಿ.ಕೆ ಸಂಘಗಳ ಅಧ್ಯಕ್ಷರು / ಪ್ರತಿನಿಧಿಗಳೊಂದಿಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿ: 31–03–2016 ರಂದು ನಡೆದ ಸಭೆಯಲ್ಲಿ 2016–17 ನೇ ಸಾಲಿನ ವೈದ್ಯಕೀಯ & ದಂತ ವೈದ್ಯಕೀಯ ಸ್ನಾತಕೋತ್ತರ ಕೋರ್ಸುಗಳಿಗೆ 2015–16 ನೇ ಸಾಲಿನಲ್ಲಿ ನಿಗದಿಪಡಿಸಿದ ಶುಲ್ಕಕ್ಕಿಂತ ಶೇ. 10 ರಷ್ಟನ್ನು ಹೆಚ್ಚಿಸಲು ತೀರ್ಮಾನಿಸಲಾಗಿರುತ್ತದೆ.

ಮುಂದುವರಿದು, ಸರ್ಕಾರಿ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕದಲ್ಲಿ ಯಾವುದೇ ಬದಲಾವಣೆ ಮಾಡದಿರಲು ತೀರ್ಮಾನಿಸಲಾಗಿದೆ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಒಳಪಡುವ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳಲ್ಲಿ ಪಿಜಿಸಿಇಟಿ ಮೂಲಕ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಸಂಬಂಧಪಟ್ಟ ವೈದ್ಯಕೀಯ ಕಾಲೇಜುಗಳು ನಿಗದಿಪಡಿಸುವ ಶುಲ್ಕವನ್ನು ಪಾವತಿಸಬೇಕಾಗಿದೆಯೆಂದು, ಆದರೆ, ಶುಲ್ಕ ಮರುಪಾವತಿಗೆ ಅರ್ಹರಾಗಿರುವ ಸೇವಾನಿರತ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಕಾಮೆಡ್–ಕೆ ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಒಪ್ಪಂದದ ಪ್ರಕಾರ ನಿಗದಿಪಡಿಸಿರುವ ಶುಲ್ಕವನ್ನು ಮರುಪಾವತಿಸಲಾಗುವುದು ಹಾಗೂ ವ್ಯತ್ಯಾಸದ ಮೊತ್ತವನ್ನು ಅಭ್ಯರ್ಥಿಗಳೇ ಸ್ವಂತವಾಗಿ ಭರಿಸತಕ್ಕದ್ದೆಂದು ತೀರ್ಮಾನಿಸಲಾಗಿದೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರೀಶಿಲಿಸಿದ ನಂತರ, ರಾಜ್ಯದಲ್ಲಿನ ಖಾಸಗಿ ವೈದ್ಯಕೀಯ/ದಂತ ವೈದ್ಯಕೀಯ ಸ್ನಾತಕೋತ್ತರ ಕೋರ್ಸುಗಳ ಸೀಟುಗಳ ಪ್ರವೇಶ ಶುಲ್ಕವನ್ನು 2016–17 ನೇ ಸಾಲಿಗೆ ಶೇ. 10 ರಷ್ಟು ಹೆಚ್ಚಿಸಿ ಪರಿಷ್ಕರಿಸಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 84 ಆರ್‌ಜಿಯು 2016, ಬೆಂಗಳೂರು, ದಿನಾಂಕ: 31-03-2016

ರಾಜ್ಯದಲ್ಲಿನ ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ ಸ್ನಾತಕೋತ್ತರ ಕೋರ್ಸುಗಳ ಸೀಟುಗಳ ಪ್ರವೇಶ ಶುಲ್ಕವನ್ನು 2016-17 ನೇ ಸಾಲಿಗೆ ಶೇ. 10 ರಷ್ಟು ಹೆಚ್ಚಿಸಿ ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಲಾಗಿದೆ.

ರಾಜ್ಯದಲ್ಲಿನ ಖಾಸಗಿ ವೈದ್ಯಕೀಯ & ದಂತ ವೈದ್ಯಕೀಯ ಕಾಲೇಜುಗಳಲ್ಲಿನ (ಕಾಮೆಡ್-ಕೆ) ಸ್ನಾತಕೋತ್ತರ ವೈದ್ಯಕೀಯ ಡಿಗ್ರಿ/ಡಿಪ್ಲೊಮಾ & ದಂತ ವೈದ್ಯಕೀಯ ಡಿಗ್ರಿ/ಡಿಪ್ಲೊಮಾ ಕೋರ್ಸಗಳ ಸೀಟುಗಳಿಗೆ ಪಾವತಿಸಬೇಕಾದ ಶುಲ್ಕದ ವಿವರ:

(ರೂ.ಗಳಲ್ಲಿ)

| ಸಂಖ್ಯೆ | ಕೋರ್ಸುಗಳ ವಿವರ | ಕಾಮೆಡ್-ಕೆ ಅಭ್ಯರ್ಥಿಗಳಿಗೆ | | ಪಿಜಿಸಿಇಟಿ ಮೂಲಕ ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
|---|---|---|---|---|---|
| | | ಪ್ರಸ್ತುತ ನಿಗದಿಪಡಿಸಿರುವ ಶುಲ್ಕ | ಪರಿಷ್ಕೃತ ಶುಲ್ಕ | ಪ್ರಸ್ತುತ ನಿಗದಿಪಡಿಸಿರುವ ಶುಲ್ಕ | ಪರಿಷ್ಕೃತ ಶುಲ್ಕ |
| 1. ವೈದ್ಯಕೀಯ ಪದವಿ: | | | | | |
| (ಅ) | ಕ್ಲಿನಿಕಲ್ | 5,52,000 | 6,00,000 | 3,69,000 | 4,00,000 |
| (ಆ) | ಪ್ಯಾರಾ ಕ್ಲಿನಿಕಲ್ | 1,38,000 | 1,50,000 | 92,000 | 1,00,000 |
| (ಇ) | ಪ್ರಿಕ್ಲಿನಿಕಲ್ | 69,000 | 75,000 | 46,300 | 50,000 |
| 2. ವೈದ್ಯಕೀಯ ಡಿಪ್ಲೊಮಾ: | | | | | |
| (ಅ) | ಕ್ಲಿನಿಕಲ್ | 4,14,000 | 4,55,000 | 2,77,100 | 3,00,000 |
| (ಆ) | ಪ್ಯಾರಾ ಕ್ಲಿನಿಕಲ್ | 1,38,000 | 1,50,000 | 92,000 | 1,00,000 |
| 3. ದಂತ ವೈದ್ಯಕೀಯ: | | | | | |
| (ಅ) | ಪದವಿ ಮತ್ತು ಡಿಪ್ಲೊಮಾ | 2,90,000 | 3,20,000 | 1,88,000 | 2,05,000 |

ರಾಜ್ಯದಲ್ಲಿನ ಖಾಸಗಿ ವೈದ್ಯಕೀಯ & ದಂತ ವೈದ್ಯಕೀಯ ಕಾಲೇಜುಗಳಲ್ಲಿನ (ಕೆಆರ್‌ಎಲ್‌ಎಂಪಿಸಿಎ & ಎಎಂಪಿಸಿಕೆ) ಸ್ನಾತಕೋತ್ತರ ವೈದ್ಯಕೀಯ ಡಿಗ್ರಿ/ಡಿಪ್ಲೊಮಾ & ದಂತ ವೈದ್ಯಕೀಯ ಡಿಗ್ರಿ/ಡಿಪ್ಲೊಮಾ ಕೋರ್ಸುಗಳ ಸೀಟುಗಳಿಗೆ ಪಾವತಿಸಬೇಕಾದ ಶುಲ್ಕದ ವಿವರ:

(ರೂ.ಗಳಲ್ಲಿ)

| ಸಂಖ್ಯೆ | ಕೋರ್ಸುಗಳ ವಿವರ | KRLMPCA & AMPCK ಅಭ್ಯರ್ಥಿಗಳಿಗೆ | | ಪಿಜಿಸಿಇಟಿ ಮೂಲಕ ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
|---|---|---|---|---|---|
| | | ಪ್ರಸ್ತುತ ನಿಗದಿಪಡಿಸಿರುವ ಶುಲ್ಕ | ಪರಿಷ್ಕೃತ ಶುಲ್ಕ | ಪ್ರಸ್ತುತ ನಿಗದಿಪಡಿಸಿರುವ ಶುಲ್ಕ | ಪರಿಷ್ಕೃತ ಶುಲ್ಕ |
| 1. ವೈದ್ಯಕೀಯ ಪದವಿ: | | | | | |
| (ಅ) | ಕ್ಲಿನಿಕಲ್ | 4,18,000 | 4,59,800 | 3,34,000 | 3,67,400 |
| (ಆ) | ಪ್ಯಾರಾ ಕ್ಲಿನಿಕಲ್ | 1,15,000 | 1,26,500 | 92,000 | 1,01,200 |
| (ಇ) | ಪ್ರಿ ಕ್ಲಿನಿಕಲ್ | 57,000 | 62,700 | 46,000 | 50,600 |

| 2. ವೈದ್ಯಕೀಯ ಡಿಪ್ಲೊಮಾ: | | | | | |
|---|---|---|---|---|---|
| (ಅ) | ಕ್ಲಿನಿಕಲ್ | 3,34,000 | 3,67,400 | 2,68,000 | 2,94,800 |
| (ಆ) | ಪ್ಯಾರಾ ಕ್ಲಿನಿಕಲ್ | 1,15,000 | 1,26,500 | 92,000 | 1,01,200 |
| 3. ದಂತ ವೈದ್ಯಕೀಯ: | | | | | |
| (ಅ) | ಪದವಿ ಮತ್ತು ಡಿಪ್ಲೊಮಾ | 2,43,600 | 2,67,960 | 1,86,400 | 2,05,040 |

ಸರ್ಕಾರಿ ಸ್ವಾಯತ್ತ ವೈದ್ಯಕೀಯ/ದಂತ ವೈದ್ಯಕೀಯ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕದಲ್ಲಿ ಯಾವುದೇ ವ್ಯತ್ಯಾಶವಿರುವುದಿಲ್ಲವಾದ್ದರಿಂದ 2015-16 ನೇ ಸಾಲಿನಲ್ಲಿ ಕೆಳಕಂಡಂತೆ ನಿಗದಿಪಡಿಸಿರುವ ಶುಲ್ಕವನ್ನೇ 2016-17 ನೇ ಸಾಲಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೂ ನಿಗದಿಪಡಿಸಲಾಗಿದೆ.

ರೂ. ಗಳಲ್ಲಿ

| ಸಂಖ್ಯೆ | ಕೋರ್ಸುಗಳ ವಿವರ | ನಿಗದಿಪಡಿಸಿರುವ ಶುಲ್ಕ |
|---|---|---|
| | **ಸ್ನಾತಕೋತ್ತರ ಪದವಿ ವೈದ್ಯಕೀಯ ಕೋರ್ಸುಗಳು** | |
| 1. | ಕ್ಲಿನಿಕಲ್ | 20,000 |
| 2. | ಪ್ಯಾರಾ ಕ್ಲಿನಿಕಲ್ | 10,000 |
| 3. | ಪ್ರಿಕ್ಲಿನಿಕಲ್ | 5,000 |
| | **ಸ್ನಾತಕೋತ್ತರ ಡಿಪ್ಲೊಮಾ ಕೋರ್ಸುಗಳು** | |
| 1. | ಕ್ಲಿನಿಕಲ್ | 20,000 |
| 2. | ಪ್ಯಾರಾ ಕ್ಲಿನಿಕಲ್ | 10,000 |
| | **ಸ್ನಾತಕೋತ್ತರ ಪದವಿ ದಂತ ವೈದ್ಯಕೀಯ ಕೋರ್ಸುಗಳು** | |
| 1. | ಕ್ಲಿನಿಕಲ್ | 20,000 |
| 2. | ಪ್ಯಾರಾ ಕ್ಲಿನಿಕಲ್ | 5,000 |

ಮುಂದುವರಿದು, ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಒಳಪಡುವ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳಲ್ಲಿ ಪಿಜಿಇಟಿ ಮೂಲಕ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಸಂಬಂಧಪಟ್ಟ ವೈದ್ಯಕೀಯ ಕಾಲೇಜುಗಳು ನಿಗದಿಪಡಿಸುವ ಶುಲ್ಕವನ್ನೇ ಪಾವತಿಸತಕ್ಕದ್ದು. ಆದರೆ, ಶುಲ್ಕ ಮರುಪಾವತಿಗೆ ಅರ್ಹರಾಗಿರುವ ಸೇವಾನಿರತ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಕಾಮೆಡ್-ಕೆ ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಒಪ್ಪಂದದ ಪ್ರಕಾರ ನಿಗದಿಪಡಿಸಿರುವ ಶುಲ್ಕವನ್ನು ಮರುಪಾವತಿಸಲಾಗುವುದು. ಆದರೆ, ವ್ಯತ್ಯಾಸದ ಮೊತ್ತವನ್ನು ಅಭ್ಯರ್ಥಿಗಳೇ ಸ್ವಂತವಾಗಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

K. Murali 31/03/2016.

**(ಕೆ.ಮುರಳಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2 (ಪ್ರ),
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

31.03.16

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.